ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 02 ಸಿಡಿಸಿ (1)/2015-16 /2652

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 02-01-2019

**-: ಸುತ್ತೋಲೆ:-**

ವಿಷಯ:- ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲಾ ಮಟ್ಟದಲ್ಲಿ ಕಡ್ಡಾಯವಾಗಿ ಅನುಷ್ಠಾನಮಾಡುವ ಬಗ್ಗೆ.

ಉಲ್ಲೇಖ:- ದಿನಾಂಕ:06-12-2018ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ.ಎಸ್.ಜಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ನಡೆದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನೆ ನಡವಳಿ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ನಡವಳಿಯಲ್ಲಿ ತಾಂತ್ರಿಕ ಶಿಕ್ಷಣಕ್ಕೆ ಸಂಬಂಧಿಸಿದಂತೆ ಡಿಪ್ಲೊಮಾ ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಅಂತಿಮ ವರ್ಷದಲ್ಲಿ ಪ್ರಾಜೆಕ್ಟ್ ಸಿದ್ಧಪಡಿಸಿ ನೀಡಬೇಕಿದ್ದು ಎಲೆಕ್ಟ್ರಾನಿಕ್ಸ್, ಗಣಕವಿಜ್ಞಾನ ವಿಷಯಗಳನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳು ಕನ್ನಡ ತಂತ್ರಾಂಶವನ್ನು ಅಭಿವೃದ್ಧಿಪಡಿಸುವ ಪ್ರಾಜೆಕ್ಟ್‌ಗಳನ್ನು ಕೈಗೆತ್ತಿಕೊಳ್ಳುವಂತೆ ಉತ್ತೇಜಿಸಿ ಪ್ರೋತ್ಸಾಹ ನೀಡುವುದು, ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಇದನ್ನು ಜಾರಿಗೊಳಿಸಿ ಕನ್ನಡ ಅಭಿವೃದ್ಧಿ ಪ್ರಾಧಿಕರವು ವರದಿ ನೀಡುವಂತೆ ಸೂಚಿಸಿದೆ.

ಆದ್ದರಿಂದ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಪ್ರಾಚಾರ್ಯರುಗಳು ಎಲೆಕ್ಟ್ರಾನಿಕ್ಸ್ ಮತ್ತು ಗಣಕ ವಿಜ್ಞಾನ ಪ್ರೋಗ್ರಾಂಗಳನ್ನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಕನ್ನಡ ತಂತ್ರಾಂಶವನ್ನು ಅಭಿವೃದ್ಧಿಪಡಿಸುವ ಪ್ರಾಜೆಕ್ಟ್‌ಗಳನ್ನು ಆದಷ್ಟು ಹೆಚ್ಚಿನ ವಿದ್ಯಾರ್ಥಿಗಳು ಕೈಗೆತ್ತಿಕೊಳ್ಳುವಂತೆ ಉತ್ತೇಜಿಸಿ ಪ್ರೋತ್ಸಾಹ ನೀಡಲು ಈ ಮೂಲಕ ಸೂಚಿಸಲಾಗಿದೆ. ಈ ಬಗ್ಗೆ ವಿಸ್ತುತ ವರದಿಯನ್ನು ನಿರ್ದೇಶಕರಿಗೆ ನೀಡಲು ತಿಳಿಸಲಾಗಿದೆ.

**ಜಂಟಿ ನಿರ್ದೇಶಕರು(ಸಿಡಿಸಿ)**

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳ ಗಮನಕ್ಕಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ- **ಇಲಾಖಾ ವೆಬ್ ಸೈಟ್ ಮುಖಾಂತರ**
2. ಇಲಾಖೆಯ ಇ-ಆಡಳಿತ ವಿಭಾಗಕ್ಕೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿದೆ.
3. ಮಾನ್ಯ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು ಇವರ ಮಾಹಿತಿಗಾಗಿ.